ಅಸಲು ದಾವಾ ಸಂಖ್ಯೆ-**179/2020** ಪಿ.ಡಬ್ಲ್ಯೂ:- **1**

ದಿನಾಂಕಃ **14-03-2025** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

ಮುಂದುವರೆದ ಪಾಟೀ ಸವಾಲು:- ಪ್ರತಿವಾದಿ ಪರ ವಕೀಲರಿಂದ:-

ವಾದ ಪತ್ರದಲ್ಲಿ ದಾವಾ ಆಸ್ತಿಯು 1 ನೇ ಪ್ರತಿವಾದಿಗೆ ಹೇಗೆ ಬಂತು ಎಂದು ನಮೂದು ಮಾಡಿಲ್ಲ ಎಂದರೆ ಸರಿ. ಪ್ರತಿವಾದಿಗಳ ಕುಟುಂಬಕ್ಕೆ ಸಂಬಂಧಿಸಿದ ಆಸ್ತಿಗಳ ಬಗ್ಗೆ ನನಗೆ ಮಾಹಿತಿ ಇರುವುದಿಲ್ಲ. ಪ್ರತಿವಾದಿಗೆ ತೋಟ ಜಮೀನು ಮತ್ತು ಆರ್ಥಿಕವಾಗಿ ಸಬಲರಾಗಿದ್ದಾರೆ ಎಂದರೆ ಸರಿ. ಬಿದರೆಹಳ್ಳಿ ಗ್ರಾಮದಲ್ಲಿ 1 ಎಕರೆ ಜಮೀನು ಎಷ್ಟು ಬೆಲೆ ಬಾಳುತ್ತದೆ ಎಂಬ ವಿಚಾರ ನನಗೆ ಗೊತ್ತಿಲ್ಲ. ಬಿದರೆಹಳ್ಳಿ ಗ್ರಾಮವು ಶಿಕಾರಿಪುರ-ಸವಳಂಗ ಮಾರ್ಗವಾಗಿ ಶಿವಮೊಗ್ಗಕ್ಕೆ ಹೋಗುವ ಹೆದ್ದಾರಿಗೆ ಹೊಂದಿಕೊಂಡಿದೆ ಎಂದರೆ ಸರಿ. ಬಿದರೆಹಳ್ಳಿ, ಜೋಗ, ಸಿದ್ದಾಪುರ, ಸವಳಂಗ ಮತ್ತು ಚಿನ್ನಿಕಟ್ಟೆ ಗ್ರಾಮಗಳ ಸುತ್ತ ಮುತ್ತಲಿನ ಜಮೀನಿನ ಮಾರುಕಟ್ಟೆಯ ಮೌಲ್ಯ ಜಾಸ್ತಿ ಇದೆ ಎಂದರೆ ನನಗೆ ಗೊತ್ತಿಲ್ಲ. ಸದರಿ ಮೇಲ್ಕಂಡ ಗ್ರಾಮಗಳ ಸುತ್ತ ಮುತ್ತಲಿನ ಜಮೀನು 1 ಎಕರೆಗೆ ರೂ. 30,00,000/- ರಿಂದ 35,00,000/- ಮಾರುಕಟ್ಟೆ ಮೌಲ್ಯ ಇದೆ ಎಂದರೆ ನನಗೆ ಗೊತ್ತಿಲ್ಲ. ನಿಪಿ-1 ಕರಾರು ಪತ್ರವನ್ನು ಕುಮಾರ್ ನಾಯ್ಕರವರು ನೊಂದಣಿ ಕಚೇರಿಯಲ್ಲಿ ಬೆರಳಚ್ಚು ಮಾಡಿಸಿರುತ್ತಾರೆ. ನನಗೆ ಅವರ ಹೆಸರು ಗೊತ್ತಿಲ್ಲ. 1 ನೇ ಪ್ರತಿವಾದಿಗೆ ಓದು ಬರಹ ಬರುವುದಿಲ್ಲ ಎಂದರೆ ನನಗೆ ಗೊತ್ತಿಲ್ಲ. ನಾನು ಪ್ರತಿವಾದಿಯನ್ನು ಹುಟ್ಟಿದಾಗಿನಿಂದಲೂ ನೋಡಿದ್ದೇನೆ. 1 ನೇ ಪ್ರತಿವಾದಿಗೆ ಓದು ಬರಹ ಬರುವುದಿಲ್ಲ ಅನಕ್ಷರಸ್ಥ ಎಂದರೆ ನನಗೆ ಗೊತ್ತಿಲ್ಲ. 1 ನೇ ಪ್ರತಿವಾದಿಗೆ ಓದು ಬರಹ ಬರುವುದಿಲ್ಲ ದಾವಾ ಆಸ್ತಿಯನ್ನು ಕಬಳಿಸುವ ಉದ್ದೇಶದಿಂದ ನಾನೇ ನಿಪಿ-1 ಕರಾರು ಪತ್ರವನ್ನು ತಯಾರಿಸಿದ್ದರೂ ಸಹ ಪ್ರತಿವಾದಿ ತಯಾರಿಸಿದ್ದಾರೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಿಪಿ-1 ಸಾಕ್ಷಿದಾರರಾಗಿ ಸಹಿ ಮಾಡಿದವರನ್ನು 1 ನೇ ಪ್ರತಿವಾದಿ ಕರೆದುಕೊಂಡು ಬಂದಿದ್ದರು

ನನಗೆ ಅವರ ಹೆಸರು ನೆನಪಿಲ್ಲ.  ಸಾಕ್ಷಿದಾರರಾಗಿ ಸಹಿ ಮಾಡಿದವರು ಬಿದರಹಳ್ಳಿ ಮತ್ತು ಲಕ್ಕಿನಕೊಪ್ಪ ಗ್ರಾಮದವರು ಆದರೆ ಅವರ ಹೆಸರು ನನಗೆ ಗೊತ್ತಿಲ್ಲ. ನಿಪಿ-1 ಕ್ಕೆ ಸಹಿ ಮಾಡಿದ ಸಾಕ್ಷಿದಾರರು ಪರಿಚಯ ಇರುತ್ತದೆ ಆದರೆ ಅವರ ಹೆಸರು ನನಗೆ ಗೊತ್ತಿಲ್ಲ. ನಿಪಿ-1 ಕ್ಕೆ ಸಾಕ್ಷಿದಾರರಾಗಿ ಸಹಿ ಮಾಡಿದವರನ್ನು ನ್ಯಾಯಾಲಯಕ್ಕೆ ಸಾಕ್ಷಿ ಹೇಳಲು ಹಾಜರುಪಡಿಸಲು ನನಗೆ ಯಾವುದೇ ತೊಂದರೆ ಇರುವುದಿಲ್ಲ. ದಾವಾ ಆಸ್ತಿಯು 1 ನೇ ಪ್ರತಿವಾದಿಯ ಒಟ್ಟು ಕುಟುಂಬದ ಪಿತ್ರಾರ್ಜಿತ ಆಸ್ತಿ ಎಂದರೆ ಇರಬಹುದು. ದಾವಾ ಆಸ್ತಿಯು 1 ನೇ ಪ್ರತಿವಾದಿಯ ಒಟ್ಟು ಕುಟುಂಬದ ಆಸ್ತಿ ಆಗಿದ್ದರಿಂದ 1 ನೇ ಪ್ರತಿವಾದಿಯ ಜೊತೆಗೆ ಅವರ ಕುಟುಂಬದ ಎಲ್ಲಾ ಸದಸ್ಯರಿಗೂ ಸಮಾನವಾದ ಭಾಗಾಂಶದ ಹಕ್ಕು ಇದೆ ಎಂದರೆ ಸರಿಯಲ್ಲ.

ಮುಂದುವರೆದ ಪಾಟೀ ಸವಾಲಿಗೆ ಕಾಲಾವಕಾಶಕೋರಿದ್ದು ನೀಡಿ ಮುಂದೂಡಲಾಯಿತು.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ  ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.